2

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾಸನ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪರಿಷ್ಕೃತ-1)ಕ್ಕೆ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ನಅಇ 874 ಮೈಅಪ್ರಾ 2008, ದಿನಾಂಕ 04-02-2009.
2) ಆಯುಕ್ತರು, ಹಾಸನ ನಗರಾಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ:ಹಾನಪ್ರಾ/ನಯೋವಿ/ಮ.ಯೋ/77/2012-13, ದಿನಾಂಕ 10-03-2015, 05-05-2015 ಮತ್ತು 16-03-2016.
3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ: ನಗ್ರಾಯೋನಿ/ಉನಿ(ಯೋವಿ)/ಮ.ಯೋ/ ಅಂತಿಮ/2014-15 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ 24-05-2014.
4) ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ 05-08-2016 ರಂದು ಹಾಸನ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪರಿಷ್ಕೃತ-1)ಕ್ಕೆ ಅಂತಿಮ ಅನುಮೋದನೆ ನೀಡುವ ಬಗ್ಗೆ ನಡೆದ ಸಭೆ.
5) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಪತ್ರ ಸಂಖ್ಯೆ: ನಗ್ರಾಯೋನಿ/ಉನಿ(ಯೋವಿ)/ಮ.ಯೋ/ಅಂತಿಮ/2014-15, ದಿನಾಂಕ 16-11-2016.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ, ಬೆಂಗಳೂರು
365
17/4/17

15/4

* * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಹಾಸನ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ (ಪರಿಷ್ಕೃತ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಪತ್ರದಲ್ಲಿ ಹಾಸನ ನಗರಾಭಿವೃದ್ಧಿ ಪ್ರಾಧಿಕಾರವು ಹಾಸನ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ (ಪರಿಷ್ಕೃತ-1) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ಮತ್ತು (2) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (3)ರ ಪತ್ರದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ ಹಾಸನ ನಗರದ ಜನಸಂಖ್ಯೆಯು 2021 ರಲ್ಲಿ 4.00 ಲಕ್ಷಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ಹಾಸನ ನಗರದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 6747.51 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ.

15/4/17

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ (12) ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ 6747.51 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 2943.16 ಹೆಕ್ಟೇರ್ (ಶೇ.43.62), ವಾಣಿಜ್ಯಕ್ಕಾಗಿ 183.14 ಹೆಕ್ಟೇರ್ (ಶೇ.2.71), ಕೈಗಾರಿಕೆಗಾಗಿ 371.95 ಹೆಕ್ಟೇರ್ (ಶೇ.5.51), ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ 529.15 ಹೆಕ್ಟೇರ್ (ಶೇ.7.84), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 583.54 ಹೆಕ್ಟೇರ್ (ಶೇ.8.66) ಸಾರ್ವಜನಿಕ ಉಪಯುಕ್ತತೆಗಾಗಿ 12.02 ಹೆಕ್ಟೇರ್ (ಶೇ.0.18), ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 2124.55 ಹೆಕ್ಟೇರ್ (ಶೇ.31.48) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಶಿಫಾರಸ್ಸಿನಂತೆ ಹಾಸನ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪರಿಷ್ಕೃತ-1)ಕ್ಕೆ ಅಂತಿಮ ಅನುಮೋದನೆ ನೀಡುವ ಬಗ್ಗೆ ಮೇಲೆ ಓದಲಾದ (4) ರಂತೆ ನಡೆದ ಸಭೆಯಲ್ಲಿ ಹಲವು ತೀರ್ಮಾನಗಳನ್ನು ಕೈಗೊಂಡು, ಸದರಿ ತೀರ್ಮಾನಕ್ಕನುಸಾರವಾಗಿ ಮಹಾಯೋಜನೆ ನಕ್ಷೆ ಮತ್ತು ವರದಿಗಳನ್ನು ಸಲ್ಲಿಸುವಂತೆ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿತ್ತು.

ಅದರಂತೆ, ಮೇಲೆ ಓದಲಾದ (5)ರ ಪತ್ರದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಸಭೆಯಲ್ಲಿ ತೀರ್ಮಾನಿಸಿದಂತೆ ಹಲವು ಅಂಶಗಳನ್ನು ವಲಯ ನಿಯಮಾವಳಿಯಲ್ಲಿ ಅಳವಡಿಸಿಕೊಂಡಿದ್ದು, ಉಳಿದ ಅಂಶಗಳ ಬಗ್ಗೆ ಸರ್ಕಾರವು ಹೊರಡಿಸುವ ಆದೇಶದಲ್ಲಿ ನಮೂದಿಸಬಹುದಾಗಿದೆ ಎಂದು ತಿಳಿಸಿ ಹಾಸನ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-1)ಗೆ ಅಂತಿಮ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 305 ಮೈಅಪ್ರಾ 2014, ಬೆಂಗಳೂರು, ದಿನಾಂಕ: 13.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಹಾಸನ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ-1)ಕ್ಕೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆ (ಪರಿಷ್ಕೃತ-1)ಕ್ಕೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

<u>ಷರತ್ತು:</u>

1) ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.
2) ಹರಳಹಳ್ಳಿ ಗ್ರಾಮದ ಸ.ನಂ.59, 60, 61, 12 (ಭಾಗಶಃ), 13 (ಭಾಗಶಃ), 14 (ಭಾಗಶಃ) ಸ.ನಂ.ಗಳಲ್ಲಿನ ಜಾಗವನ್ನು ಕೈಗಾರಿಕ ಉಪಯೋಗದಿಂದ ವಸತಿಗಾಗಿ ಕಾಯ್ದಿರಿಸಲಾಗಿದೆ.

3) ದೊಡ್ಡಪುರ ಗ್ರಾಮದ ಸ.ನಂ.166, 167, 168, 169, 170, 171, 172, 173, 174, 175, 176, 177, 178 (ಭಾಗಶಃ), 179 (ಭಾಗಶಃ), 180, 181 (ಭಾಗಶಃ), 184 (ಭಾಗಶಃ), 185 (ಭಾಗಶಃ), 186, 187, 188, 189, 190, 191, 192, 194, 195, 196, 197, 198, 199, 200 (ಭಾಗಶಃ), 201 (ಭಾಗಶಃ), 202 (ಭಾಗಶಃ), 203 (ಭಾಗಶಃ), 204, 205 (ಭಾಗಶಃ), 206 (ಭಾಗಶಃ), 209 (ಭಾಗಶಃ) ಗಳಲ್ಲಿನ ಜಮೀನುಗಳನ್ನು ಸಾರಿಗೆ ಮತ್ತು ಸಂಪರ್ಕ ವಲಯದ ಭೂ ಉಪಯೋಗದಿಂದ ವಸತಿಗಾಗಿ ಕಾಯ್ದಿರಿಸಲಾಗಿದೆ. ಮುಂದುವರೆದು, ಸದರಿ ಜಮೀನುಗಳಲ್ಲಿನ ಹಾಲಿ / ಪ್ರಸ್ತಾಪಿತ ರಸ್ತೆಗಳನ್ನು ಯಥಾವತ್ತಾಗಿ ಕಾಯ್ದಿರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

ಸಂಕಲನಾಧಿಕಾರಿ, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರಿಗೆ ಸದರಿ ಆದೇಶವನ್ನು ಇಂದೇ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ, ಅದರ ಪ್ರಕಟಿತ ಅಧಿಸೂಚನೆಯ 100 ಪ್ರತಿಗಳನ್ನು ಕಳುಹಿಸುವಂತೆ ಕೋರಲಾಗಿದೆ.

ಇವರಿಗೆ:

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2) ಜಿಲ್ಲಾಧಿಕಾರಿ, ಹಾಸನ ಜಿಲ್ಲೆ, ಹಾಸನ.
3) ಆಯುಕ್ತರು, ಹಾಸನ ನಗರಾಭಿವೃದ್ಧಿ ಪ್ರಾಧಿಕಾರ, ಹಾಸನ.
4) ಜಂಟಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ವಿಭಾಗೀಯ ಕಛೇರಿ, ಮೈಸೂರು.
5) ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಹಾಸನ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.